ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:- ಶ್ರೀ ಶಿವರಾಮ್.ಕೆ.ಚವ್ಹಾಣ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಸವಕಲ್ಯಾಣ ಬೀದರ್ ಜಿಲ್ಲೆ, ಇವರ ಅಮಾನತ್ತು ಅವಧಿಯನ್ನು ಸಕ್ರಮಗೊಳಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ವಿಸೇಬಿ 2009. ದಿ:24-06-2009.
2.ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ವಿಸೇಬಿ 2009. ದಿ:01-02-2010.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ವಿಸೇಬಿ 2009.ದಿ:16-11- 2011..
4. ಶ್ರೀ ಶಿವರಾಮ್.ಕೆ.ಚವ್ಹಾಣ, ಇವರ ಮನವಿ ದಿ:02-12-2015.

-------

ಪ್ರಸ್ತಾವನೆ:-

ಶ್ರೀ ಶಿವರಾಮ್.ಕೆ.ಚವ್ಹಾಣ ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಔರಾದ್, ಬೀದರ್ ಜಿಲ್ಲೆ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದಾರೆನ್ನಲಾದ ಕರ್ತವ್ಯಲೋಪ/ದುರ್ನಡತೆ ಆರೋಪಗಳಿಗೆ ಸಂಬಂಧಿಸಿದಂತೆ, ಮೇಲೆ ಓದಲಾದ (1)ರಲ್ಲಿ ದಿನಾಂಕ:24.06.2009 ರಂದು ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು. ಹಾಗೂ ಸದರಿಯವರ ಇಲಾಖಾ ವಿಚಾರಣೆ ಬಾಕಿ ಇಟ್ಟು ಮೇಲೆ ಓದಲಾದ (2)ರ ಆದೇಶದಲ್ಲಿ ದಿ:01-02-2010 ರಂದು ಸೇವೆಗೆ ಪುನರ್ ಸ್ಥಾಪಿಸಲಾಗಿದೆ.

ಮೇಲಿನ ಕ್ರಮಸಂಖ್ಯೆ(3)ರಲ್ಲಿ ಓದಲಾದ ದಿನಾಂಕ:16.11.2011ರ ಆದೇಶದಲ್ಲಿ ಶ್ರೀ ಶಿವರಾಮ್.ಕೆ.ಚವ್ಹಾಣ ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಸವಕಲ್ಯಾಣ, ಬೀದರ್ ಜಿಲ್ಲೆ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದಾರೆನ್ನಲಾದ ಕರ್ತವ್ಯಲೋಪ/ದುರ್ನಡತೆ ಆರೋಪಗಳಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 8(ii)ರಡಿ ಪ್ರದತ್ತವಾದ ಅಧಿಕಾರದನ್ವಯ "ವಾಗ್ದಂಡನೆ" ವಿಧಿಸಿ, ಇನ್ನು ಮುಂದೆ ತಮ್ಮ ಕರ್ತವ್ಯದಲ್ಲಿ ಯಾವುದೇ ನಿರ್ಲಕ್ಷತೆಗೆ ಅವಕಾಶ ಕೊಡದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಲು ಸೂಚಿಸಿ ಆದೇಶಿಸಲಾಗಿತ್ತು.

ಮೇಲೆ ಕ್ರಮಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ::02-12-2015ರ ಪತ್ರದಲ್ಲಿ, ಶ್ರೀ ಶಿವರಾಮ್.ಕೆ.ಚವ್ಹಾಣ ಇವರು ಸರ್ಕಾರಕ್ಕೆ ಮನವಿ ಸಲ್ಲಿಸಿ, ದಿನಾಂಕ:01-07-2009 ರಿಂದ 01-02-2010ರ ಅಮಾನತ್ತು ಅವಧಿಯನ್ನು ತಮ್ಮ ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸಿ, ಉಳಿದ ಶೇ. 50ರಷ್ಟು ವೇತನವನ್ನು ಬಿಡುಗಡಗೊಳಿಸಬೇಕೆಂದು ಕೋರಿರುತ್ತಾರೆ. ಶ್ರೀ ಶಿವರಾಮ್.ಕೆ.ಚವ್ಹಾಣ ರವರ ಕೋರಿಕೆ ಬಗ್ಗೆ ಪರಿಶೀಲಿಸಿದೆ.

ಶ್ರೀ ಶಿವರಾಮ್.ಕೆ.ಚವ್ಹಾಣ, ಇವರ ದಿನಾಂಕ:01-07-2009 ರಿಂದ 01-02-2010ರ ವರೆಗಿನ ಅಮಾನತ್ತು ಅವಧಿಯನ್ನು ಅವರ ಹಕ್ಕಿನಲ್ಲಿರುವ 329 ಪರಿವರ್ತಿತ ರಜೆಗಳನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ 100(7) ರನ್ವಯ ಮಂಜೂರು ಮಾಡಿ, ದಿನಾಂಕ: 01-07-2009 ರಿಂದ 01-02-2010ರ ವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ 100ರಡಿಯಲ್ಲಿ ಅಮಾನತ್ತಿನ ಅವಧಿಯನ್ನು ಸಕ್ರಮಗೊಳಿಸಿ ಅವರ ಹಕ್ಕಿನಲ್ಲಿರುವ ರಜೆ/ಅಸಾಧಾರಣ ರಜೆಯೆಂದು ಪರಿಗಣಿಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 129 ವಿಸೇಬಿ 2015, ಬೆಂಗಳೂರು ದಿನಾಂಕ:04-02-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಶಿವರಾಮ್.ಕೆ.ಚವ್ಹಾಣ,ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಸವಕಲ್ಯಾಣ, ಬೀದರ್ ಜಿಲ್ಲೆ, ಪ್ರಸ್ತುತ ನಿವೃತ್ತಿ ಇವರ ದಿನಾಂಕ: 01-07-2009 ರಿಂದ 01-02-2010ರ ವರೆಗಿನ ಅಮಾನತ್ತಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ

ನಿಯಮಾವಳಿಗಳು 1958ರ ನಿಯಮ 100 (7)ರ ಪ್ರಕಾರ ಅವರ ಹಕ್ಕಿನಲ್ಲಿರುವ ರಜೆ/ಅಸಾಧಾರರಣ ರಜೆಯೆಂದು ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
T. Manju 4.2.16
(ಟಿ. ಮಂಜುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ & ಸಿ)(ಪ್ರ).
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು (ಲೆಕ್ಕಪತ್ರ 1 &2) / (ಆಡಿಟ್), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೀದರ್.
3. ಶ್ರೀ ಶಿವರಾಮ್.ಕೆ.ಚವ್ಹಾಣ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ, ತಾಜ್ ಕಾಲೋನಿ,1ನೇಕ್ರಾಸ್,ಮನೆ ನಂ.28-875, ಬಸವಕಲ್ಯಾಣ, ಬೀದರ್ ಜಿಲ್ಲೆ.

ಪ್ರತಿಯನ್ನು ಮಾಹಿತಿಗಾಗಿ:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.